# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 630

ಸದಸ್ಯರ ಹೆಸರು : ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ಸಚಿವರು : **ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.**

ಉತ್ತರಿಸುವ ದಿನಾಂಕ : 23.12.2022

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 1 ವರ್ಷದಿಂದ ಕೊಬ್ಬರಿ ಧಾರಣೆಯು ಇಳಿಮುಖವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಕೊಬ್ಬರಿ ಧಾರಣೆಯು ಇಳಿಮುಖವಾಗುತ್ತಿರುವುದಕ್ಕೆ ಕಾರಣಗಳೇನು; (ವಿವರ ನೀಡುವುದು) | ರಾಜ್ಯದ ಪ್ರಮುಖ ಮಾರುಕಟ್ಟೆಗಳಲ್ಲಿ ಕೊಬ್ಬರಿ ಧಾರಣೆಯು ಮಾರ್ಚ್ 2022 ರ ಮಾಹೆಯಲ್ಲಿ ಕೊಬ್ಬರಿ ಧಾರಣೆಯು ಪ್ರತಿ ಕ್ವಿಂಟಾಲಿಗೆ ಕನಿಷ್ಠ ರೂ. 15,400/- ರಿಂದ ಗರಿಷ್ಠ ರೂ. 17,000/- ರವರೆಗಿನ ಧಾರಣೆಯಲ್ಲಿ ಮಾರಾಟವಾಗುತ್ತಿದ್ದ ಧಾರಣೆಯು ಪ್ರಸ್ತುತ ಸಾಲಿನಲ್ಲಿ ಅತೀವೃಷ್ಟಿಯಿಂದಾಗಿ ಕೊಬ್ಬರಿಯ ತೇವಾಂಶವು ಹೆಚ್ಚಾಗಿರುವುದರಿಂದ, ಅಂತಹ ಕೊಬ್ಬರಿ ಹೆಚ್ಚಿನ ದಿನ ಶೇಖರಿಸಿಡಲು ಆಗದೇ ಇರುವುದರಿಂದ ಹೊರರಾಜ್ಯದ ಖರೀದಿದಾರರು ಕೊಬ್ಬರಿಯನ್ನು ಖರೀದಿಸಲು ಹೆಚ್ಚಿನ ಆಸಕ್ತಿ ತೋರದೇ ಇರುವುದರಿಂದ, ಕೊಬ್ಬರಿ ಧಾರಣೆಯು ಇಳಿಮುಖವಾಗಿರುತ್ತದೆ. ಪ್ರಸ್ತುತ ದಿನಾಂಕ: 15.12.2022 ರ ಅಂತ್ಯಕ್ಕೆ ಉಂಡೆ ಕೊಬ್ಬರಿ ಪ್ರತಿ ಕ್ವಿಂಟಾಲಿಗೆ ಕನಿಷ್ಠ ರೂ. 11,200/- ರಿಂದ ಗರಿಷ್ಠ ರೂ. 14,000/- ರವರೆಗಿನ ಧಾರಣೆಯಲ್ಲಿ ಮಾರಾಟವಾಗುತ್ತಿದೆ. |
| ಆ) | ಕೊಬ್ಬರಿ ಧಾರಣೆಯು ಇಳಿಮುಖವಾಗುತ್ತಿರುವುದರಿಂದ ತೆಂಗು ಬೆಳೆಗಾರರಿಗೆ ಆಗುತ್ತಿರುವ ನಷ್ಟವನ್ನು ಸರಿದೂಗಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು. ತೆಂಗು ಬೆಳೆಗಾರರಿಗೆ ಸರ್ಕಾರವು ಪರಿಹಾರ ಘೋಷಿಸಿದೆಯೇ. (ಸಂಪೂರ್ಣ ವಿವರ ನೀಡುವುದು) | ತೆಂಗು ಬೆಳೆಗಾರರಿಗೆ ಸರ್ಕಾರವು ಯಾವುದೇ ಪರಿಹಾರವನ್ನು ಘೋಷಿಸಿರುವುದಿಲ್ಲ.<br><br>ಮುಂದುವರೆದು ತೋಟಗಾರಿಕೆ ಇಲಾಖೆ ವತಿಯಿಂದ ತೆಂಗು ಅಭಿವೃದ್ಧಿ ಮಂಡಳಿ (CDB) ಯೋಜನೆಯಡಿ ತೆಂಗು ಮರುನಾಟಿ ಮತ್ತು ಪುನ:ಶ್ಚೇತನ ಕಾರ್ಯಕ್ರಮದಲ್ಲಿ ತೆಂಗು ಬೆಳೆಯ ಪುನ:ಶ್ಚೇತನಕ್ಕಾಗಿ ಒಂದು ಹೆಕ್ಟೇರ್ ಗೆ ರೂ. 44750/- ಗಳಂತೆ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ 1850 ಹೆಕ್ಟೇರ್ ಗೆ ಸಹಾಯಧನ ನೀಡುವ ಕಾರ್ಯಕ್ರಮ ಇರುತ್ತದೆ.<br><br>ರಾಜ್ಯ ವಲಯ ಯೋಜನೆಯಡಿ ತೆಂಗು ಬೆಳೆಯಲ್ಲಿ ಮಿಶ್ರ ಬೆಳೆಯಾಗಿ ಕೋಕೋ ಹಾಗೂ ಕಾಳು ಮೆಣಸು ಬೆಳೆಯನ್ನು ಪ್ರೋತ್ಸಾಹಿಸಲಾಗುತ್ತಿದೆ. |

| | | |
|---|---|---|
| | | ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಹೊಸ ತೆಂಗು ಪ್ರದೇಶ ವಿಸ್ತರಣೆಗೆ ಪ್ರೋತ್ಸಾಹಿಸಲಾಗುತ್ತಿದೆ.<br><br>ತೆಂಗು ಬೆಳೆಗೆ ನೀರಾವರಿ ಕಲ್ಪಿಸಲು ಹನಿ ನೀರಾವರಿ ಯೋಜನೆಯಡಿಯಲ್ಲಿ ಸಹಾಯಧನ ವಿತರಿಸಲಾಗುತ್ತಿದೆ.<br><br>ಸಮಗ್ರ ರೋಗ/ಕೀಟ ನಿಯಂತ್ರಣ ಯೋಜನೆಯಡಿಯಲ್ಲಿ ತೆಂಗು ಬೆಳೆಯ ರೋಗ/ಕೀಟಗಳ ನಿಯಂತ್ರಿಸಲು ಪ್ರತಿ ಹೆಕ್ಟೇರ್ ಗೆ ರೂ.7500/- ಗಳಂತೆ ಸಾಮಾನ್ಯ ವರ್ಗದವರಿಗೆ ಹಾಗೂ ರೂ.9000/- ಗಳಂತೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಸಹಾಯಧನ ನೀಡಲಾಗುತ್ತಿದೆ. |
| ಇ) | ತೆಂಗು ಬೆಳೆಗಾರರಿಗೆ ವಿಶೇಷ ಪ್ಯಾಕೇಜ್ ಅಥವಾ ಬೆಂಬಲ ಬೆಲೆ ಘೋಷಿಸಲು ಮತ್ತು ನಾಫೆಡ್ ಮೂಲಕ ಕೊಬ್ಬರಿ ಖರೀದಿ ಕೇಂದ್ರಗಳನ್ನು ತೆರೆಯವ ಬಗ್ಗೆ ಸರ್ಕಾರದ ನಿಲುವೇನು? (ವಿವರ ನೀಡುವುದು) | ತೆಂಗು ಬೆಳೆಗಾರರಿಗೆ ಸರ್ಕಾರದಿಂದ ಯಾವುದೇ ವಿಶೇಷ ಪ್ಯಾಕೇಜ್ ಘೋಷಿಸಿರುವುದಿಲ್ಲ. ಮುಂದುವರೆದು ಉತ್ತರದ ಕ್ರ.ಸಂ: (ಅ) ರಲ್ಲಿ ತಿಳಿಸಿರುವಂತೆ ಸಹಾಯಧನ ನೀಡುವ ಮೂಲಕ ಬೆಳೆಗಾರರನ್ನು ಪ್ರೋತ್ಸಾಹಿಸಲಾಗುತ್ತಿದೆ.<br>2022-23ನೇ ಸಾಲಿಗೆ ಕೇಂದ್ರ ಸರ್ಕಾರವು ಎಫ್.ಎ.ಕ್ಯೂ ಗುಣಮಟ್ಟದ ಉಂಡೆ ಕೊಬ್ಬರಿ ಪ್ರತಿ ಕ್ವಿಂಟಾಲಿಗೆ ರೂ. 11,000/- ಗಳ ಬೆಂಬಲ ಬೆಲೆಯನ್ನು ಘೋಷಿಸಿರುತ್ತದೆ. ಪ್ರಸ್ತುತ ಉಂಡೆ ಕೊಬ್ಬರಿ ಪ್ರತಿ ಕ್ವಿಂಟಾಲಿಗೆ ಕನಿಷ್ಠ ರೂ. 11,200/- ರಿಂದ ಗರಿಷ್ಠ ರೂ. 14,000/- ರವರೆಗಿನ ಧಾರಣೆಯಲ್ಲಿ ಮಾರಾಟವಾಗುತ್ತಿದೆ. ರಾಜ್ಯದ ಪ್ರಮುಖ ಮಾರುಕಟ್ಟೆಗಳಲ್ಲಿ ಉಂಡೆ ಕೊಬ್ಬರಿಯ ಧಾರಣೆಯು ಕೇಂದ್ರ ಸರ್ಕಾರವು ಘೋಷಿಸಿರುವ ಬೆಂಬಲ ಬೆಲೆಗಿಂತ ಕಡಿಮೆಯಾದಂತಹ ಸಂದರ್ಭದಲ್ಲಿ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಶಿಫಾರಸ್ಸು ಸ್ವೀಕೃತವಾದಲ್ಲಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗುತ್ತದೆ. ಕೇಂದ್ರ ಸರ್ಕಾರದಿಂದ ಅನುಮೋದನೆ ಬಂದ ಕೂಡಲೇ ಕೃಷಿ ಮತ್ತು ತೋಟಗಾರಿಕಾ ಉತ್ಪನ್ನಗಳ ಬೆಲೆ ಸ್ಥಿರೀಕರಣ ಸಚಿವ ಸಂಪುಟ ಉಪ ಸಮಿತಿ ಸಭೆಯ ನಿರ್ಣಯಕ್ಕೆ ಒಳಪಟ್ಟಿರುತ್ತದೆ. |

**ಸಂಖ್ಯೆ: HORTI 666 HGM 2022**

(ಮುನಿರತ್ನ)
**ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು**